# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 354 |
| 2 | ಸದಸ್ಯರ ಹೆಸರು | ಶ್ರೀ ಎಸ್.ಎಲ್.ಧರ್ಮೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ವಿಷಯ | ಕಳಸ ಮತ್ತು ಸಖರಾಯಪಟ್ಟಣ ಹೋಬಳಿ ಕೇಂದ್ರಗಳನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡುವ ಬಗ್ಗೆ. |
| 4 | ಉತ್ತರಿಸುವ ದಿನಾಂಕ | 12.12.2018 |
| 5 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಚಿಕ್ಕಮಗಳೂರು ಜಿಲ್ಲೆಯ ಕಳಸ ಮತ್ತು ಸಖರಾಯಪಟ್ಟಣಗಳಿಗೆ ತಾಲ್ಲೂಕು ಕೇಂದ್ರ ಗಳು ದೂರದಲ್ಲಿರುವುದರಿಂದ ಜನ ಸಾಮಾನ್ಯರಿಗೆ ದೈನಂದಿನ ಕೆಲಸ ಕಾರ್ಯ ನಿಮಿತ್ತ ಸರ್ಕಾರಿ ಕಛೇರಿಗಳಿಗೆ ಭೇಟಿ ನೀಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| (ಆ) | ಹಾಗಿದ್ದಲ್ಲಿ, ಕಳಸ ಹಾಗೂ ಸಖರಾಯಪಟ್ಟಣ ದೊಡ್ಡ ಹೋಬಳಿ ಕೇಂದ್ರಗಳಾಗಿದ್ದು, ಅವುಗಳನ್ನು ತಾಲ್ಲೂಕು ಕೇಂದ್ರಗಳನ್ನಾಗಿ ಘೋಷಣೆ ಮಾಡುವ ಬಗೆಗಿನ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ: | ಕಳಸ ಮತ್ತು ಸಖರಾಯಪಟ್ಟಣ ಹೋಬಳಿಗಳನ್ನು ತಾಲ್ಲೂಕು ಕೇಂದ್ರವನ್ನಾಗಿ ಮಾಡುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| (ಇ) | ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಕಳಸ ಹಾಗೂ ಸಖರಾಯಪಟ್ಟಣ ಹೋಬಳಿ ಕೇಂದ್ರಗಳನ್ನು ತಾಲ್ಲೂಕು ಕೇಂದ್ರಗಳನ್ನಾಗಿ ಘೋಷಣೆ ಮಾಡಲಾಗುವುದೇ; | 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯತೆಗಳನ್ನು ಪರಿಗಣಿಸಿ, 50 ಹೊಸ ತಾಲ್ಲೂಕುಗಳನ್ನು ರಚಿಸಲಾಗಿರುತ್ತದೆ. ಇದರಲ್ಲಿ ಮೂಡಿಗೆರೆ ತಾಲ್ಲೂಕು ಕಳಸ ಮತ್ತು ಸಖರಾಯಪಟ್ಟಣ ಹೋಬಳಿಗಳು ಸೇರಿರುವುದಿಲ್ಲ. ಯಾವುದೇ ಒಂದು ಹೋಬಳಿ/ಪ್ರದೇಶವನ್ನು ತಾಲ್ಲೂಕನ್ನಾಗಿ ರಚಿಸುವ ವಿಷಯವು ಸರ್ಕಾರದ ನೀತಿಯ ವಿಷಯವಾಗಿದೆ. ಹೊಸ ತಾಲ್ಲೂಕೊಂದನ್ನು ರಚಿಸಬೇಕಾದರೆ ಒಂದು ಅಂದಾಜಿನಂತೆ ರೂ.28.87 ಕೋಟಿಗಳ ಅನುದಾನ ಅಗತ್ಯವಿದೆ. ಹೊಸ ತಾಲ್ಲೂಕುಗಳ ರಚನೆಯು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಂಪೂರ್ಣವಾಗಿ ಅವಲಂಬಿಸಿರುತ್ತದೆ. |
| (ಈ) | ತಾಲ್ಲೂಕು ಕೇಂದ್ರಕ್ಕೆ ಅವಶ್ಯವಿರುವಂತಹ ಎಲ್ಲಾ ಮೂಲ ಸೌಲಭ್ಯಗಳು ಲಭ್ಯ ವಿರುವುದರಿಂದ ತಾಲ್ಲೂಕು ಕೇಂದ್ರಗಳನ್ನಾಗಿ ಘೋಷಣೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು) | |

ಕಂಇ 123 ಭೂದಾಮ 2018

(ಆರ್.ವಿ.ದೇಶಪಾಂಡೆ)
ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು